ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ:	297
ಸದಸ್ಯರ ಹೆಸರು	ಶ್ರೀ. ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕಃ	09.12.2020
ಉತ್ತರಿಸುವ ಸಚಿವರು:	ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಇಲಾಖೆ

ಕ್ರ ಸಂ	ಪ್ರಶ್ನೆಗಳು	ಉತ್ತರಗಳು
ಅ	ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕು ಮದ್ದೂರು – ಕೊಪ್ಪ ಮುಖ್ಯ ರಸ್ತೆಯಿಂದ ಡಿ.ಹೊಸಹಳ್ಳಿ ಮಾರ್ಗವಾಗಿ ಬಿದರಕೋಟೆ ಸೇರುವ ರಸ್ತೆಗೆ ಲೆಕ್ಕಶೀರ್ಷಿಕೆ 5054 ಅಡಿಯಲ್ಲಿ ಡಾಂಬರೀಕರಣ / ರಸ್ತೆ ಅಭಿವೃದ್ಧಿ ಕಾಮಗಾರಿ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು, ಸರ್ಕಾರದ ಗಮನಕ್ಕೆ ಬಂದಿದೆ ಮದ್ದೂರು ತಾಲ್ಲೂಕು ಮದ್ದೂರು – ಕೊಪ್ಪ ಮುಖ್ಯ ರಸ್ತೆಯಿಂದ ಡಿ.ಹೊಸಹಳ್ಳಿ ಮಾರ್ಗವಾಗಿ ಬಿದರಕೋಟೆ ಸೇರುವ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು 2017–18ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ 5054–ಜಿಲ್ಲಾ ಮುಖ್ಯ ರಸ್ತೆಗಳು ಅಡಿಯಲ್ಲಿ ರೂ.300.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಟೆಂಡರ್ ಮುಖಾಂತರ ಕೈಗೊಳ್ಳಲಾಗಿದೆ.
ಆ	ಸದರಿ ರಸ್ತೆಗೆ ಡಾಂಬರೀಕರಣ / ರಸ್ತೆ ಅಭಿವೃದ್ಧಿ ಕಾಮಗಾರಿ ಮಾಡುವ ಸಂದರ್ಭದಲ್ಲಿ ಡಿ.ಹೊಸಹಳ್ಳಿಯಲ್ಲಿ ಎರಡು ಸೇತುವೆಗಳನ್ನು ನಿರ್ಮಿಸದಿರುವುದರಿಂದ ಅಪಘಾತಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸೇತುವೆಗಳನ್ನು ಯಾವಾಗ ನಿರ್ಮಿಸಲಾಗುವುದು.	ಸದರಿ ರಸ್ತೆಯ ಗ್ರಾಮಪರಿಮಿತಿಯಲ್ಲಿ ಕಾಂಕ್ರೀಟ್ ಚರಂಡಿ ಹಾಗೂ 3 ಸೇತುವೆಗಳ ನಿರ್ಮಾಣ ಮಾಡಬೇಕಾಗಿದ್ದು, ಅನುಮೋದಿತ ಅಂದಾಜು ಪಟ್ಟಿಯಲ್ಲಿ ಸೇತುವೆಗಳ ನಿರ್ಮಾಣ ಹೊರತುಪಡಿಸಿ ರಸ್ತೆ ಅಭಿವೃದ್ಧಿಯನ್ನು ರೂ.300.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿರುತ್ತದೆ. ಸೇತುವೆಗಳ ನಿರ್ಮಾಣಕ್ಕೆ ಅನುದಾನದ ಕೊರತೆಯಿರುವುದರಿಂದ ಈ ಕಾಮಗಾರಿಯನ್ನು ಕೈಗೆತ್ತಿಕೊಂಡಿರುವುದಿಲ್ಲ.
ಇ	ಸದರಿ ರಸ್ತಗೆ ಡಾಂಬರೀಕರಣ / ರಸ್ತೆ ಅಭಿವೃದ್ಧಿ ಕಾಮಗಾರಿ ಮಾಡುವ ಸಂದರ್ಭದಲ್ಲಿ ಗ್ರಾಮದ ಪರಿಮಿತಿಯಲ್ಲಿ ರಸ್ತೆಯ ಇಕ್ಕೆಲಗಳಲ್ಲಿ ಚರಂಡಿಯನ್ನು ನಿರ್ಮಿಸದಿರುವುದರಿಂದ ಕೊಳಚೆ ನೀರು ರಸ್ತೆಗೆ ಬಂದು ರಸ್ತೆಗಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವಾಗ ಚರಂಡಿಗಳನ್ನು ನಿರ್ಮಿಸಲಾಗುವುದು ? (ಮಾಹಿತಿ ನೀಡುವುದು)	ಈಗಾಗಲೆ ಕಾಮಗಾರಿಯನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಿರುವ ಅಂದಾಜು ಪಟ್ಟಿಯಲ್ಲಿ ಇಕ್ಕೆಲಗಳಲ್ಲಿ ಚರಂಡಿ ನಿರ್ಮಾಣ, ಸೇತುವೆ ನಿರ್ಮಾಣದ ಅವಕಾಶ ಇಲ್ಲದಿರುವುದರಿಂದ ಚರಂಡಿ ಮತ್ತು ಸೇತುವೆಗಳನ್ನು ನಿರ್ಮಿಸಿರುವುದಿಲ್ಲ. ಮುಂದಿನ ಸಾಲಿನಲ್ಲಿ ಅನುದಾನದ ಲಭ್ಯತೆಯನುಸಾರ ಚರಂಡಿ ಮತ್ತು ಸೇತುವೆ ನಿರ್ಮಾಣ ಕಾಮಗಾರಿ ಕುರಿತು ತೀರ್ಮಾನಿಸಲಾಗುವುದು.

ಲೋಇ 114 ಸಿಕ್ಯೂಎನ್ 2020(ಇ)

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು,
ಲೋಕೋಪಯೋಗಿ ಇಲಾಖೆ